ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ತಂತ್ರಾಂಶವನ್ನು ಅಭಿವೃದ್ಧಿ ಪಡಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1263 (1434) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕರ ನಿಧಿಯ ಅನುದಾನ ಬಳಕೆಗಾಗಿ ಸರ್ಕಾರದಿಂದ ರೂಪಿಸಿರುವ ಮಾನದಂಡಗಳೇನು ;

(ಆ) ಸದರಿ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಲು ಮಾನ್ಯ ಶಾಸಕರುಗಳಿಗೆ ತರಬೇತಿ ಶಿಬಿರಗಳನ್ನು ಏರ್ಪಡಿಸಿ ಯೋಜನೆಗಳ ಬಗ್ಗೆ ಮಾಹಿತಿ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ "ಗಾಂಧಿ ಸಾಕ್ಷಿ ಕಾಯಕ" ಎಂಬ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಈ ತಂತ್ರಾಂಶವನ್ನು ಬಳಸಿ ಸಾಧಿಸಿರುವ ಪ್ರಗತಿಯನ್ನು ವರ್ಷವಾರು, ಕಾಮಗಾರಿವಾರು, ಶಾಸಕರ ಕ್ಷೇತ್ರವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು;

(ಈ) ಈ ಹಿಂದೆ ಯೋಜನಾ ಇಲಾಖೆಯಿಂದ ಅಭಿವೃದ್ಧಿಪಡಿಸಲಾದ ಕೆ-ಲಾಡ್ಸ್ ವೆಬ್‌ಸೈಟ್‌ನಲ್ಲಿ ಇದ್ದ ನ್ಯೂನ್ಯತೆಗಳೇನು ; (ವಿವರ ಒದಗಿಸುವುದು) ಸದರಿ ತಂತ್ರಾಂಶದ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ವೆಚ್ಚವಾಗಿರುª À ಹಣವೆಷ್ಟು ; ಸದರಿ ತಂತ್ರಾಂಶವನ್ನು ತಡೆಹಿಡಿದು ಹೊಸ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಕಾರಣವೇನು ; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ "ವಿಶೇಷ ಘಟಕ ಯೋಜನೆ" ಯು ಯಾವ ಸಾಲಿನಲ್ಲಿ ಪ್ರಾರಂಭವಾಯಿತು ; ಈ ಯೋಜನೆಗೆ ಇರುವ ಮಾನದಂಡಗಳೇನು ; ಸದರಿ ಯೋಜನೆಗೆ ಪ್ರಾರಂಭದಿಂದ ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಊ) ಹಿಂದುಳಿದ ಮತ್ತು ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ಅಭಿವೃದ್ಧಿಯಾಗಿರುವ ಕುರಿತು ಮೌಲ್ಯಮಾಪನ ಕೈಗೊಳ್ಳಲಾಗಿದೆಯೇ; ಸದರಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)